**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 96/2020**

**ಚಾ.ಸಾಃ 7, ಫ್ರಾ.ಸಾಃ 5**

| | |
|---|---|
| ಸಾಕ್ಷಿದಾರನ ಹೆಸರು | ವಿನಾಯಕ ಭಟ್ಟ |
| ತಂದೆಯ ಹೆಸರು | ಸುಬ್ರಹ್ಮಣ್ಯ ಭಟ್ಟ |
| ವಯಸ್ಸು | 50 ವರ್ಷಗಳು |
| ಉದ್ಯೋಗ | ರೈತ |
| ವಾಸ್ತವ್ಯ | ಸಾಲ್ಕೋಡ, ಗೋಡಮಕ್ಕಿ, ತಾಃ ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 17-03-2023 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಸಾಕ್ಷಿಗೆ ಈ ಪ್ರಕರಣದ ನಿಪಿ-5 ಮಾಲು ಜಪ್ತು ಪಂಚನಾಮೆಯನ್ನು ತೋರಿಸಲಾಗಿ ಅದರ ಮೇಲಿನ ಒಂದು ಸಹಿಯನ್ನು ಸಾಕ್ಷಿ ತನ್ನದು ಎಂದು ತಿಳಿಸಿದ್ದರಿಂದ ಅದರ ಮೇಲಿನ ಸಾಕ್ಷಿ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ದಿನಾಂಕ 05-08-2020 ರಂದು ಹೊನ್ನಾವರದ ಸಿಪಿಐರವರ ಕಚೇರಿಯಲ್ಲಿ ಮಾಡಿರುತ್ತೇನೆ. ಕಳ್ಳತನವಾಗಿದ್ದ ಚಿನ್ನದ ಆಭರಣಗಳು ಅಂದರೆ ಒಂದು ಜೊತೆ ಕಿವಿಯ ಓಲೆ ಮತ್ತು ಜುಮುಕಿ ಕುಡುಕನ್ನು ಹಾಗೂ ಇತರೇ ಆಭರಣಗಳನ್ನು ಚಾಸಾ-10 ಅನಿಲ್ ಶೇಟರವರು ಹಾಜರು ಮಾಡಿದ್ದು ಪೋಲೀಸರು ಅದನ್ನು ಜಪ್ತುಮಾಡಿಕೊಂಡು ಪಂಚನಾಮೆ ಮಾಡಿ ನನ್ನ ಸಹಿ ಪಡೆದಿರುತ್ತಾರೆ. ಆ ಸಂದರ್ಭದಲ್ಲಿ ನನ್ನ ಜೊತೆ ಚಾಸಾ-6 ನಾಗೇಶ ಮಡಿವಾಳ ಹಾಜರಿದ್ದರು. ಸದರಿ ಆಭರಣಗಳನ್ನು ಪೋಲಿಸರು ಕರ್ಕಿಯ ಚಾಸಾ-11 ದೀಪಕ ಶೆಟ್ಟಿಯನ್ನು ಕರೆಸಿ ಪರಿಶೀಲಿಸಿ ತೂಕ ಮಾಡಿಸಿ ಮೌಲ್ಯ ಮಾಪನ ಮಾಡಿಸಿರುತ್ತಾರೆ. ಆ ಸಂದರ್ಭದಲ್ಲಿ ಛಾಯಾಚಿತ್ರ ತೆಗೆಸಿದ್ದು ಅದನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನಿಪಿ-6 ಛಾಯಾಚಿತ್ರವನ್ನು ಗುರುತಿಸಿರುತ್ತಾರೆ.

ಆಭರಣಗಳನ್ನು ನೋಡಿದರೆ ಗುರುತಿಸುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದ ಎರಡು ಜೊತೆ ಕಿವಿಯೋಲೆಗಳನ್ನು ಸಾಕ್ಷಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ಮುಮಾ-1 ಮತ್ತು 2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿಠ್ಠಲ ಎಂ. ಭಂಡಾರಿಯವರಿಂದಃ**

ಪೋಲೀಸ್ ಠಾಣೆಯ ಪಕ್ಕದಲ್ಲಿದ್ದ ಮೆಡಿಕಲ್ ಶಾಪಿಗೆ ನಾನು ನನ್ನ ಅಣ್ಣನ ಜೊತೆ ಬಂದಿದ್ದಾಗ ಪೋಲಿಸರು ಠಾಣೆಗೆ ನನ್ನನ್ನು ಕರೆಸಿರುತ್ತಾರೆ. ಚಾಸಾ-10 ರವರು ನಾನು ಹೋಗುವ ಮೊದಲೇ ಬಂದಿದ್ದರು. ಚಾಸಾ-10 ರವರು ಎಷ್ಟು ಪ್ರಕರಣಗಳಿಗೆ ಸಂಬಂಧಿಸಿದ ಆಭರಣಗಳನ್ನು ಹಾಜರು

ಮಾಡಿದ್ದಾರೆ ಎನ್ನುವುದನ್ನು ನನಗೆ ಹೇಳಿರುವುದಿಲ್ಲ. ಚಾಸಾ–10 ರವರು ಸುಮಾರು 25 ರಿಂದ 30 ಆಭರಣಗಳನ್ನು ಆ ದಿನ ಹಾಜರು ಮಾಡಿರಬಹುದು. ನಿಪಿ–5 ರಲ್ಲಿ ಎಷ್ಟು ಪ್ರಕರಣಗಳಿಗೆ ಸಂಬಂಧಿಸಿದ ಆಭರಣಗಳನ್ನು ಹಾಜರು ಮಾಡಲಾಗಿದೆ ಎಂದು ಬರೆಯಲಾಗಿದೆ ಎನ್ನುವುದನ್ನು ಹೇಳಲಾಗುವುದಿಲ್ಲ. ಸದರಿ ದಿನದಂದು ಚಾಸಾ–10 ರವರು ನನ್ನ ಮುಂದೆ ಯಾವುದೇ ಆಭರಣಗಳನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ಆದರೂ ಸಹ ಚಾಸಾ–10 ರವರು ಬಂಗಾರದ ಆಭರಣಗಳನ್ನು ಹಾಜರು ಮಾಡಿದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ–11 ರವರು ಬಂದು ಬಂಗಾರದ ಆಭರಣಗಳನ್ನು ಪರಿಶೀಲಿಸಿ ತೂಕ ಮಾಡಿ ಮೌಲ್ಯ ಮಾಪನ ಮಾಡಿದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**